ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 47,78,71,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 17,62,14,000 ರೂ.ಗಳಿಗಿಂತ ಮೀರದ ಮೊತ್ತರನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು".

ಪ್ರಶ್ನೋತ್ತರಗಳು

ಚುಕ್ಕೆಗುರುತಿನ ಪ್ರಶ್ನೆಗಳಿಗೆ ಬಾಯಿಮಾತಿನ ಮೂಲಕ ನೀಡಲಾದ ಉತ್ತರಗಳು

ಶ್ರೀ ಆರ್.ವಿ. ದೇಶಪಾಂಡೆ : ಈಗ ಏಳೂವರೆ ಗಂಟೆಯಾಗಿದೆ. ಇನ್ನೂ ಉತ್ತರಗಳು ಬಂದಿಲ್ಲ.

ಅಧ್ಯಕ್ಷರು : ಪ್ರಶ್ನೆಗಳನ್ನು ತೆಗೆದುಕೊಳ್ಳದಿದ್ದರೆ ಅವು ಲ್ಯಾಪ್ಸ್ ಆಗುತ್ತದೆ.

ಶ್ರೀ ಪಿ.ಜಿ.ಆರ್. ಸಿಂಧ್ಯ : ಈಗ ಪ್ರಶ್ನೆಗಳಿಗೆ ಉತ್ತರ ಕೊಡಲಿಕ್ಕೆ ಸಂಬಂಧಪಟ್ಟ ಮಂತ್ರಿಗಳು ಸದನದಲ್ಲಿ ಇಲ್ಲ. ಅದಕ್ಕೋಸ್ಕರ ನಾನು ಅವರನ್ನು ಕರೆಸಬೇಕೆಂದು ಕೇಳಿಕೊಳ್ಳುತ್ತಿದ್ದೇನೆ. ತಾವು ದಯವಿಟ್ಟು ಸರ್ಕಾರಕ್ಕೆ ಆದೇಶ ಕೊಡಬೇಕು. ಮುಖ್ಯವಾಗಿ ಶಿಕ್ಷಣ ಮಂತ್ರಿಗಳು ಇಲ್ಲ.

ಅಧ್ಯಕ್ಷರು : ಶಿಕ್ಷಣ ಮಂತ್ರಿಗಳು ನನಗೆ ಕಾಗದ ಬರೆದಿದ್ದಾರೆ. ಅವರ ಪರವಾಗಿ ಶ್ರೀ ಪುಟ್ಟಸ್ವಾಮಿಗೌಡರು ಉತ್ತರ ಕೊಡುತ್ತಾರೆ.

ರಾಯಚೂರು ಜಿಲ್ಲೆಯಲ್ಲಿರುವ ಶಾಲಾರಹಿತ ಗ್ರಾಮಗಳ ಸಂಖ್ಯೆ.

3473-ಶ್ರೀ ಮಲ್ಲಿಕಾರ್ಜುನ ದಿವಟರ್ (ಕೊಪ್ಪಳ), ಶ್ರೀ ಬಸವನಗೌಡ ಪಾಟೀಲ್ ಮಾನ್ವಿ (ರಾಯಚೂರು) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಯಚೂರು ಜಿಲ್ಲೆಯಲ್ಲಿರುವ ಶಾಲಾರಹಿತ ಗ್ರಾಮಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರಗಳನ್ನೊದಗಿಸುವುದು).

ಆ) ಈ ಗ್ರಾಮಗಳಿಗೆ ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ತೆರೆಯಲು ಸರ್ಕಾರ ಆಸಕ್ತಿ ತಾಳಿದೆಯೇ?

ಇ) ಸರ್ಕಾರದಿಂದ ತೀವ್ರವಾಗಿ ಶಿಕ್ಷಕರನ್ನು ಶಾಲೆಗಳಿಗೆ ಒದಗಿಸಲಾಗಿದ್ದಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಶಾಲೆಗಳನ್ನು ನಡೆಸಲು ಅನುಮತಿ ನೀಡಲಾಗುವುದೇ?

ಶ್ರೀ ಎಂ. ವೀರಪ್ಪಮೊಯಿಲಿ (ಶಿಕ್ಷಣ ಸಚಿವರು)

ಅ) 1990-91ರಲ್ಲಿದ್ದಂತೆ ರಾಯಚೂರು ಜಿಲ್ಲೆಯಲ್ಲಿ ಶಾಲಾ ರಹಿತ ಹಳ್ಳಿಗಳ ಒಟ್ಟು ಸಂಖ್ಯೆ : 222) (ತಾಲ್ಲೂಕುವಾರು ಪಟ್ಟಿ ಲಗತ್ತಿಸಿದೆ).

ಆ) ಶಾಲಾ ರಹಿತ ಹಳ್ಳಿಯಲ್ಲಿ 300ಕ್ಕಿಂತ ಹೆಚ್ಚು ಜನಸಂಖ್ಯೆ ಇದ್ದು ಶಾಲೆಗೆ ಹೋಗುವ ವಯಸ್ಸಿನ ಕನಿಷ್ಟ 20 ಮಕ್ಕಳು ಆ ಸ್ಥಳದಲ್ಲಿ ಇದ್ದಲ್ಲಿ ಆಯಾ ಹಳ್ಳಿಗಳಲ್ಲಿ ಪ್ರಾಥಮಿಕ ಶಾಲೆ ಪ್ರಾರಂಭಿಸಲು ಸರ್ಕಾರ ಆಸಕ್ತಿ ಹೊಂದಿದೆ.

ಇ) ಖಾಸಗಿ ಶಾಲೆಗಳನ್ನು ಇಂತಹ ಹಳ್ಳಿಗಳಲ್ಲಿ ಪ್ರಾರಂಭಿಸುವ ಬಗ್ಗೆ ಖಾಸಗಿ ಸಂಸ್ಥೆಯವರು ಮುಂದೆ ಬಂದರೆ ಅಂತಹ ಸಂಸ್ಥೆಗಳಿಗೆ ಶಾಲೆಗಳನ್ನು ತೆರೆಯಲು ಸೂಕ್ತ ಮಾರ್ಗಸೂಚಿಗಳನ್ನು ಆದೇಶ ಸಂಖ್ಯೆ : ಇಡಿ 23 ಪಿಜಿಸಿ 91 ದಿನಾಂಕ 5-6-91 ರಲ್ಲಿ ನೀಡಿದೆ.